ಮೀನುಗಾರರಿಗೆ ಮನೆ

478 (740) ಶ್ರೀ ಶ್ರೀನಿವಾಸ್ ಎಂ. (ಮಂಡ್ಯ):– ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಡ್ಯ ಜಿಲ್ಲೆಯಲ್ಲಿ ಆಶ್ರಯ ಯೋಜನೆಯಡಿಯಲ್ಲಿ ಮೀನುಗಾರರಿಗೆ ಮನೆಗಳನ್ನು ನಿರ್ಮಿಸಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಆ) ಈ ಯೋಜನೆಗಾಗಿ ಸರ್ಕಾರ ಸ್ಥಳ ಗುರುತಿಸಿದೆಯೇ (ತಾಲ್ಲೂಕುವಾರು ಪೂರ್ಣ ವಿವರಗಳನ್ನು ನೀಡುವುದು) ;

ಇ) ಮೀನುಗಾರರಿಗೆ ಎಷ್ಟು ಮನೆಗಳನ್ನು ಎಂದಿನಿಂದ ನಿರ್ಮಿಸಿ ಕೊಡಲಾಗುವುದು;

ಈ) ಪ್ರತಿಯೊಂದು ಮನೆಯನ್ನು ನಿರ್ಮಿಸಲು ಸರ್ಕಾರ ನಿಗದಿಪಡಿಸಿರುವ ಅನುದಾನದ ಮೊತ್ತವೆಷ್ಟು (ವಿವರ ನೀಡುವುದು) ?

ಶ್ರೀ ಆನಂದ ವಸಂತ ಆಸ್ನೋಟಿಕರ್ (ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು):–

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.

ಪಶು ಘಟಕಗಳ ಮಾಹಿತಿ

480 (352) ಶ್ರೀ ಸುರೇಶ್‌ಗೌಡ (ನಾಗಮಂಗಲ): ಮಾನ್ಯ ಪಶುಸಂಗೋಪನಾ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಡ್ಯ ಜಿಲ್ಲೆ, ನಾಗಮಂಗಲ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಪ್ರಾಥಮಿಕ ಪಶು ಘಟಕ, ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಗಳಿವೆ; ಈ ಪೈಕಿ ಸ್ವಂತ ಕಟ್ಟಡದಲ್ಲಿ ಎಷ್ಟಿವೆ; ಬಾಡಿಗೆ ಕಟ್ಟಡದಲ್ಲಿ ಎಷ್ಟಿವೆ (ಅವು ಯಾವುದು);